1044 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆ ವಿಫಲರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ದಿನಾಂಕ :30–6–2009ರ ಅಂತ್ಯದ ವೇಳೆಗೆ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ ;

ಇ) ಜಿಲ್ಲೆಯಲ್ಲಿ ವಿಶೇಷವಾಗಿ ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಮಳೆ ಬೀಳದಿದ್ದುದರಿಂದ ಜನರಿಗೆ ಕುಡಿಯುವ ನೀರಿನ ತೊಂದರೆ ಮತ್ತು ಜಾನುವಾರುಗಳಿಗೆ ಮೇವಿನ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಹಾಗಿದ್ದಲ್ಲಿ, ಜಿಲ್ಲಾಡಳಿತವು ಬೀದರ್ ಜಿಲ್ಲೆಯಲ್ಲಿ ಮಳೆ ವಿಫಲವಾಗಿರುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ ;

ಉ) ಜಿಲ್ಲೆಯಲ್ಲಿ ಬರಗಾಲ ಪರಿಸ್ಥಿತಿಯನ್ನು ಎದುರಿಸಲು ಸರ್ಕಾರ ಬೀದರ್ ಜಿಲ್ಲೆಗೆ ಹಣವನ್ನೇನಾದರೂ ಬಿಡುಗಡೆ ಮಾಡಿದೆಯೇ ; (ವಿವರಗಳನ್ನು ಒದಗಿಸುವುದು) ;

ಊ) ಇಲ್ಲದಿದ್ದಲ್ಲಿ ಸರ್ಕಾರವೇ ಈ ಬಗ್ಗೆ ಗಮನ ಹರಿಸಿ ಬೀದರ್ ಜಿಲ್ಲೆಯಲ್ಲಿ ಮಳೆಯಾಗದೆ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆ ಮಾಡುವುದರ ಜೊತೆಗೆ ಬರಗಾಲ ಕಾಮಗಾರಿಗಳನ್ನು ಪ್ರಾರಂಭಿಸುವುದರ ಜೊತೆಗೆ ಕುಡಿಯುವ ನೀರಿನ ಸರಬರಾಜು ಹಾಗೂ ಜಾನುವಾರುಗಳಿಗೆ ಮೇವಿನ ಪೂರೈಕೆ ಮಾಡಲು ಕ್ರಮ ಕೈಗೊಳ್ಳುವುದೇ?

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಜೂನ್ 1 ರಿಂದ ಜುಲೈ 14ರವರೆಗೆ ಸಾಮಾನ್ಯವಾಗಿ ಬೀದರ್ ಜಿಲ್ಲೆಯಲ್ಲಿ 200 ಮಿ.ಮಿ ಮಳೆಯಾಗಬೇಕಾಗಿದ್ದು 155 ಮಿ.ಮಿ ಮಳೆಯಾಗಿ, ಶೇಕಡ 22 ರಷ್ಟು ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಜೂನ್ ತಿಂಗಳ ತಾಲ್ಲೂಕುವಾರು ಮಳೆ ವಿವರ ಕೆಳಗಿನಂತಿರುತ್ತದೆ.

ತಾಲ್ಲೂಕು	ಜೂನ್ ತಿಂಗಳ ವಾಡಿಕೆ ಮಳೆ (ಮಿ.ಮಿ)	ಬಿದ್ದ ಮಳೆ (ಮಿ.ಮಿ)
ಬೀದರ್	150.00	170.00
ಭಾಲ್ಕಿ	144.00	54.00
ಬಸವಕಲ್ಯಾಣ	87.00	144.8
ಹುಮನಾಬಾದ	139.00	228.8
ಔರಾದ್ (ಬಿ)	142.00	52.2

ಇ) ಭಾಲ್ಕಿ ವಿಧಾನ ಸಭಾ ಕ್ಷೇತ್ರದಲ್ಲಿ 8 ಗ್ರಾಮಗಳಲ್ಲಿ ರೂ. 20.00 ಲಕ್ಷಗಳಲ್ಲಿ 9 ಕುಡಿಯುವ ನೀರಿನ ಕಾಮಗಾರಿಗಳನ್ನು ಮಂಜೂರು ಮಾಡಿ ರೂ. 15.00 ಲಕ್ಷ ಹಣವನ್ನು ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡಿದ್ದಾರೆ. ಜಿಲ್ಲೆಯಲ್ಲಿ ಮೇವಿನ ಕೊರತೆ ಇರುವುದಿಲ್ಲವೆಂದು ಪಶುಸಂಗೋಪನಾ ನಿರ್ದೇಶಕರು ವರದಿ ಸಲ್ಲಿಸಿರುತ್ತಾರೆ.

ಈ) ಇಲ್ಲ.

ಉ) 2008–09ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಪ್ರಕೃತಿ ವಿಕೋಪ ಪರಿಹಾರಕ್ಕೆ ರೂ. 850.00 ಲಕ್ಷ ಹಣವನ್ನು ಬಿಡುಗಡೆ ಮಾಡಿದ್ದು ದಿನಾಂಕ: 10–07–2009ರಂದು ಜಿಲ್ಲಾಧಿಕಾರಿಗಳ ಸಿಆರ್‌ಎಫ್ ಪಿ.ಡಿ. ಖಾತೆಯಲ್ಲಿ ರೂ. 223.93 ಲಕ್ಷ ಹಣ ಉಳಿಕೆ ಇರುತ್ತದೆ.

ಊ) ರಾಜ್ಯದಲ್ಲಿನ ಹಾಗೂ ಬೀದರ್ ಜಿಲ್ಲೆಯ ಮಳೆ, ಬೆಳೆ ಪರಿಸ್ಥಿತಿ, ಕುಡಿಯುವ ನೀರು, ಮೇವು ಸಂಬಂಧಿತ ಪರಿಸ್ಥಿತಿಯನ್ನು ಹವಾಮಾನ, ಬೆಳೆ ಪರಿಸ್ಥಿತಿ, ಬರ ಪರಿಹಾರ ಕ್ರಮಗಳ ಬಗ್ಗೆ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಚಿಸಿರುವ ರಾಜ್ಯ ಮಟ್ಟದ ಉಸ್ತುವಾರಿ ಸಮಿತಿ ವಾರಂಪ್ರತಿ ಪರಿಶೀಲಿಸುತ್ತಿದೆ. ಬರಪರಿಹಾರ ಮತ್ತು ಪ್ರವಾಹ ಹಾನಿ ಬಗ್ಗೆ ಪರಿಶೀಲನೆ ನಡೆಸಲು ರಚಿಸಿರುವ ಸಚಿವ ಸಂಪುಟ ಉಪ ಸಮಿತಿ ಕೂಡ ಸ್ಥಿತಿಗಳ ಬಗ್ಗೆ ಆಗಿಂದಾಗ್ಗೆ ಪರಿಶೀಲನೆ ನಡೆಸುತ್ತಿದೆ. ಬರಕ್ಕೆ ತುತ್ತಾದ ಪ್ರದೇಶಗಳ ಗುರುತಿಸುವಿಕೆಯನ್ನು ಜುಲೈ ತಿಂಗಳ ಅಂತ್ಯಕ್ಕೆ ಪರಾಮರ್ಶೆ ಮಾಡಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದು. ಸಧ್ಯಕ್ಕೆ ಬೀದರ್ ಜಿಲ್ಲೆಯಲ್ಲಿ ಕುಡಿಯುವ ನೀರಿನ ಹಾಗೂ ಮೇವಿನ ಸಮಸ್ಯೆ ಇರುವುದಿಲ್ಲ. ಪ್ರಸ್ತುತ ಪರಿಸ್ಥಿತಿಯನ್ನು ನಿಭಾಯಿಸಲು ಜಿಲ್ಲಾ ಮಟ್ಟದಲ್ಲಿ ಸಂಪನ್ಮೂಲ ಲಭ್ಯತೆಯಿರುತ್ತದೆ.